Akashvani: Bangalore
National Bulletin In Kannada
21.03.2026: 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
********

ಮುಖ್ಯಾಂಶಗಳು:

- ಪಶ್ಚಿಮ ಏಷ್ಯಾ ಬಿಕ್ಕಟ್ಟು; ತೈಲ ಪೂರೈಕೆ ಮತ್ತು ನಾಗರಿಕರ ರಕ್ಷಣೆಗೆ ಕೇಂದ್ರ ಸರ್ಕಾರದಿಂದ ದೃಢ ಕ್ರಮ
- ನೂತನ ಆದಾಯ ತೆರಿಗೆ ಕಾಯ್ದೆ-೨೦೨೫ರ ಜಾಗೃತಿಗೆ 'ಪ್ರಾರಂಭ್-೨೦೨೬' ಅಭಿಯಾನ - ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ
- ದೇಶಾದ್ಯಂತ ಇಂದು ಈದ್ ಉಲ್ ಫಿತರ್ ಆಚರಣೆ; ಸಮಾಜದಲ್ಲಿ ಏಕತೆ ಮತ್ತು ಸೌಹಾರ್ದತೆ ಬೆಳೆಸಲು ರಾಷ್ಟ್ರಪತಿ ಕರೆ
- ಆರ್ಲಿಯನ್ಸ್ ಮಾಸ್ಟರ್ಸ್ ಬ್ಯಾಡ್ಮಿಂಟನ್ ಟೂರ್ನಿ; ಮಹಿಳಾ ಸಿಂಗಲ್ಸ್‌ನ ಸೆಮಿಫೈನಲ್ ಪ್ರವೇಶಿಸಿದ ಭಾರತದ ತನ್ವಿ ಶರ್ಮಾ

********

ಪಶ್ಚಿಮ ಏಷ್ಯಾದಲ್ಲಿ ಉಂಟಾಗಿರುವ ಪರಿಸ್ಥಿತಿಯನ್ನು ಎದುರಿಸಲು ಕೇಂದ್ರ ಸರ್ಕಾರ ಅತ್ಯಂತ ಸಂಘಟಿತ ಮತ್ತು ಮುನ್ನೆಚ್ಚರಿಕೆಯ ಕ್ರಮಗಳನ್ನು ಕೈಗೊಂಡಿದೆ. ವಿವಿಧ ಸಚಿವಾಲಯಗಳ ಜಂಟಿ ಸಹಯೋಗದೊಂದಿಗೆ ದೇಶಾದ್ಯಂತ ಇಂಧನ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಸರ್ಕಾರ ಕಟ್ಟುನಿಟ್ಟಿನ ನಿಗಾವಹಿಸಿದೆ. ಪ್ರಮುಖವಾಗಿ ಕಾಳಸಂತೆ ಮಾರಾಟ, ಸಾರ್ವಜನಿಕರಿಂದ ಆತಂಕದ ಖರೀದಿ ತಡೆಯಲು ಸರ್ಕಾರ ಕ್ರಮ ಕೈಗೊಂಡಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ. ಎಲ್ಲಾ ಸಂಸ್ಕರಣಾಗಾರಗಳು ಸಾಕಷ್ಟು ಕಚ್ಚಾ ತೈಲ ದಾಸ್ತಾನುಗಳೊಂದಿಗೆ ಹೆಚ್ಚಿನ ಸಾಮರ್ಥ್ಯದಲ್ಲಿ ಕಾರ್ಯ ನಿರ್ವಹಿಸುತ್ತಿದೆ. ದೇಶೀಯ ಎಲ್‌ಪಿಜಿ ಉತ್ಪಾದನೆ ಸ್ಥಿರವಾಗಿದೆ ಮತ್ತು ಸಾಕಷ್ಟು ಸಂಗ್ರಹ ಲಭ್ಯವಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಈ ಕುರಿತು ನವದೆಹಲಿಯಲ್ಲಿ ನಿನ್ನೆ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ, ಕಳೆದ ಒಂದು ವಾರದಲ್ಲಿ ಗ್ರಾಹಕರಿಗೆ ೧೧ ಸಾವಿರದ ೩೦೦ ಟನ್ ವಾಣಿಜ್ಯ ಎಲ್‌ಪಿಜಿಯನ್ನು ಪೂರೈಸಲಾಗಿದೆ.

ದೇಶಿಯ ಎಲ್‌ಪಿಜಿ ಉತ್ಪಾದನೆಯು, ಶೇಕಡ ೪೦ರಷ್ಟು ಹೆಚ್ಚಾಗಿದೆ ಎಂದು ತಿಳಿಸಿದರು. ಆನ್‌ಲೈನ್‌ನಲ್ಲಿ ಎಲ್‌ಪಿಜಿ ಸಿಲೆಂಡರ್‌ಗಳ ಬುಕ್ಕಿಂಗ್ ಶೇಕಡಾ ೯೩ಕ್ಕೆ ಏರಿಕೆಯಾಗಿದೆ. ಇದೇ ವೇಳೆ, ಅತಂಕದಿಂದ ಎಲ್‌ಪಿಜಿ ಸಿಲಿಂಡರ್‌ಗಳ ಬುಕ್ಕಿಂಗ್ ಮಾಡುವ ಗ್ರಾಹಕರ ಸಂಖ್ಯೆ ತಗ್ಗಿದೆ ಎಂದು ಅವರು ಹೇಳಿದ್ದಾರೆ. ಅಕ್ರಮ ಸಿಲಿಂಡರ್‌ಗಳನ್ನು ದಾಸ್ತಾನು ಮಾಡಿದ್ದ ಆರೋಪಕ್ಕೆ ಸಂಬಂಧಿಸಿದಂತೆ ದೇಶಾದ್ಯಂತ ನಿನ್ನೆ ನಾಲ್ಕು ಸಾವಿರದ ೫೦೦ ಕಡೆಗಳಲ್ಲಿ ದಾಳಿ ನಡೆಸಲಾಗಿದೆ ಎಂದು ಸುಜಾತಾ ಶರ್ಮಾ ಮಾಹಿತಿ ನೀಡಿದರು. ವಿದೇಶಾಂಗ ಸಚಿವಾಲಯ ಅನಿವಾಸಿ ಭಾರತೀಯರ ಸುರಕ್ಷತೆಗೆ ಮೊದಲ ಆದ್ಯತೆ ನೀಡಿದ್ದು, ಸಂಕಷ್ಟದಲ್ಲಿರುವ ನೂರಾರು ಜನರನ್ನು ಈಗಾಗಲೇ ಸುರಕ್ಷಿತವಾಗಿ ಸ್ಥಳಾಂತರಿಸಲಾಗಿದೆ. ಈ ಜಾಗತಿಕ ಬಿಕ್ಕಟ್ಟಿನಿಂದ ರಫ್ತುದಾರರಿಗೆ ಉಂಟಾಗಬಹುದಾದ ಆರ್ಥಿಕ ನಷ್ಟವನ್ನು ತಡೆಯಲು ಸರ್ಕಾರ ರಿಲೀಫ್ ಎಂಬ ವಿಶೇಷ ಯೋಜನೆ ಜಾರಿಗೆ ತಂದಿದೆ ಎಂದು ಸಚಿವಾಲಯ ತಿಳಿಸಿದೆ.

********

ಪಶ್ಚಿಮ ಏಷ್ಯಾದಲ್ಲಿ ಅಮೆರಿಕ, ಇಸ್ರೇಲ್ ಜಂಟಿ ಪಡೆ ಹಾಗೂ ಇರಾನ್ ನಡುವಿನ ಸಂಘರ್ಷದಿಂದಾಗಿ ಪರಿಸ್ಥಿತಿ ತೀವ್ರಗತಿಯಲ್ಲಿ ಉಲ್ಬಣಗೊಳ್ಳುತ್ತಿದೆ. ಗಲ್ಫ್ ರಾಷ್ಟ್ರಗಳ ಪ್ರಮುಖ ಇಂಧನ ಮೂಲಸೌಕರ್ಯಗಳ ಮೇಲೆ ಮಿಲಿಟರಿ ದಾಳಿಗಳು ಮತ್ತು ಪ್ರತಿದಾಳಿಗಳು ಆ ಪ್ರದೇಶದಲ್ಲಿ ಪರಿಸ್ಥಿತಿಯನ್ನು ಮತ್ತಷ್ಟು ಬಿಗಡಾಯಿಸಿವೆ. ಇದು ಈದ್ ಉಲ್ ಫಿತರ್ ಮತ್ತು ಪರ್ಶಿಯನ್ ಹೊಸ ವರ್ಷದ ಸಂಭ್ರಮಾಚರಣೆಯ ಮೇಲೂ ಪರಿಣಾಮಬೀರಿದೆ. ಏರುತ್ತಿರುವ ತೈಲ ಬೆಲೆಗಳನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಅಮೆರಿಕ, ಸಮುದ್ರದಲ್ಲಿ ಸಿಲುಕಿರುವ ಇರಾನಿನ ತೈಲದ ಮೇಲಿನ ನಿರ್ಬಂಧಗಳನ್ನು ಒಂದು ತಿಂಗಳ ಪರವಾನಗಿ ಅಡಿಯಲ್ಲಿ ತೆಗೆದು ಹಾಕುವುದಾಗಿ ತಿಳಿಸಿದೆ. ಹಡಗುಗಳಲ್ಲಿ ನಿನ್ನೆಯವರೆಗೆ ತುಂಬಿಸಲಾದ ಇರಾನಿನ ತೈಲಕ್ಕೆ ಈ ವಿನಾಯಿತಿ ಅನ್ವಯಿಸಲಿದ್ದು, ಇದು ಮುಂದಿನ ತಿಂಗಳ ೧೯ರಂದು ಕೊನೆಗೊಳ್ಳಲಿದೆ. ಈ ನಡುವೆ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಇರಾನ್‌ನೊಂದಿಗೆ ಕದನ ವಿರಾಮವನ್ನು ತಳ್ಳಿ ಹಾಕಿದ್ದಾರೆ. ಅಮೆರಿಕ ಈ ಪ್ರದೇಶಕ್ಕೆ ಇನ್ನೂ ಮೂರು ಯುದ್ಧ ನೌಕೆಗಳನ್ನು ಮತ್ತು ಸುಮಾರು ಎರಡು ಸಾವಿರದ ೫೦೦ಕ್ಕೂ ಹೆಚ್ಚಿನ ನೌಕಾಪಡೆಯನ್ನು ನಿಯೋಜಿಸುತ್ತಿದೆ. ಇರಾನ್‌ನಲ್ಲಿ ಯುದ್ಧವನ್ನು ಶೀಘ್ರದಲ್ಲೇ ಕೊನೆಗೊಳಿಸಲು ಅಮೆರಿಕ ಪರಿಗಣಿಸುತ್ತಿದ್ದು, ಇತರ ರಾಷ್ಟ್ರಗಳು ಹರ್ಮುಜ್ ಜಲಸಂಧಿಯನ್ನು ಕಾಪಾಡಬೇಕು ಎಂದು ಅಧ್ಯಕ್ಷ ಟ್ರಂಪ್ ಹೇಳಿದ್ದಾರೆ.

ಇದಕ್ಕೂ ಮುನ್ನ ಹರ್ಮುಜ್ ಜಲಸಂಧಿಯನ್ನು ಗುರಿಯಾಗಿಸಿಕೊಂಡಿರುವ ಇರಾನಿನ ನೆಲೆಗಳ ಮೇಲೆ ದಾಳಿ ನಡೆಸಲು ಬ್ರಿಟೀಷ್ ನೆಲೆಗಳನ್ನು ಬಳಸಲು ಅಮೆರಿಕಾಗೆ ಅವಕಾಶ ನೀಡಲು ಯುಕೆ ಒಪ್ಪಿಕೊಂಡಿತು.

********

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನವದೆಹಲಿಯಲ್ಲಿ ನಿನ್ನೆ ಆದಾಯ ತೆರಿಗೆ ಕಾಯ್ದೆ-೨೦೨೫ರ ಕುರಿತು ದೇಶಾದ್ಯಂತ ಜಾಗೃತಿ ಮೂಡಿಸುವ ಪ್ರಾರಂಭ್ - ೨೦೨೬ ಎಂಬ ಬೃಹತ್ ಅಭಿಯಾನಕ್ಕೆ ಚಾಲನೆ ನೀಡಿದ್ದಾರೆ. ಮುಂದಿನ ತಿಂಗಳ ೧ ರಿಂದ ಜಾರಿಗೆ ಬರಲಿರುವ ಈ ನೂತನ ಕಾಯ್ದೆಯ ಪ್ರಮುಖ ವೈಶಿಷ್ಟ್ಯಗಳ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಲು ಈ ಬಹು ಮಾಧ್ಯಮ ಉಪಕ್ರಮ ರೂಪಿಸಲಾಗಿದೆ. ಪತ್ರಿಕೆಗಳು, ರೇಡಿಯೋ, ದೂರದರ್ಶನ, ಡಿಜಿಟಲ್ ಮತ್ತು ಸಾಮಾಜಿಕ ಜಾಲತಾಣಗಳ ಮೂಲಕ ಈ ಅಭಿಯಾನ ದೇಶದ ಮೂಲೆ ಮೂಲೆಗೂ ತಲುಪಿ, ತೆರಿಗೆದಾರರಲ್ಲಿ ಅರಿವು ಮೂಡಿಸುವ ಉದ್ದೇಶ ಹೊಂದಿದೆ. ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಹಣಕಾಸು ಸಚಿವರು, ನೂತನ ಆದಾಯ ತೆರಿಗೆ ಕಾಯ್ದೆಯ ತೆರಿಗೆ ಪಾವತಿ ಪ್ರಕ್ರಿಯೆಯಲ್ಲಿ ಉಂಟಾಗುತ್ತಿದ್ದ ನ್ಯೂನತೆಗಳನ್ನು ತಪ್ಪಿಸಲು ಕಾನೂನು ವಿವಾದಗಳನ್ನು ಮತ್ತು ತೆರಿಗೆದಾರರ ಮೇಲಿನ ಹೊರೆಯನ್ನು ಕಡಿಮೆ ಮಾಡಲಿದೆ ಎಂದು ತಿಳಿಸಿದರು. ನೂತನ ಕಾಯ್ದೆ ಹೆಚ್ಚು ಸರಳವಾಗಿದ್ದು, ಸಾಮಾನ್ಯ ಜನರಿಗೂ ಅರ್ಥವಾಗುವಂತಹ ಚೌಕಟ್ಟನ್ನು ಹೊಂದಿದೆ. ಹಳೆಯ ಕಾಯ್ದೆಯ ಪ್ರತಿ ವಿಭಾಗವನ್ನೂ ಮರು ರೂಪಿಸಲಾಗಿದ್ದು, ಜನರಿಗೆ ಸುಲಭವಾಗಿ ಅರ್ಥವಾಗುವಂತೆ ಸೂತ್ರಗಳನ್ನು ಅಳವಡಿಸಲಾಗಿದೆ ಎಂದರು.

*****ಧ್ವನಿ****ನಿರ್ಮಲಾ ಸೀತಾರಾಮನ್

********

ಪವಿತ್ರ ರಂಜಾನ್ ಮಾಸದ ಉಪವಾಸದ ಸಮಾಪ್ತಿಯನ್ನು ಸೂಚಿಸುವ ಈದ್ ಉಲ್ ಫಿತರ್ ಹಬ್ಬವನ್ನು ಇಂದು ದೇಶಾದ್ಯಂತ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಮುಸ್ಲಿಂ ಬಾಂಧವರು ಸಾಂಪ್ರದಾಯಿಕ ಉಡುಗೆ ತೊಟ್ಟು, ಈದ್ಗಾ ಮೈದಾನ ಮತ್ತು ಮಸೀದಿಗಳಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿ, ಪರಸ್ಪರ ಶುಭಾಶಯ ಹಾಗೂ ಸಿಹಿ ಹಂಚುವ ಮೂಲಕ ಸಂಭ್ರಮಾಚರಣೆಯಲ್ಲಿ ತೊಡಗಲಿದ್ದಾರೆ. ದೆಹಲಿಯ ಜಮಾ ಮಸೀದಿ ಸೇರಿದಂತೆ ಪ್ರಮುಖ ಪ್ರಾರ್ಥನಾ ಸ್ಥಳಗಳಲ್ಲಿ ವಿಶೇಷ ಈದ್ ಸಂಭ್ರಮಾಚರಣೆಗಳು ನಡೆಯಲಿದ್ದು, ಭದ್ರತೆಗಾಗಿ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ.

ಈ ಸಂದರ್ಭದಲ್ಲಿ ದೇಶದ ಸಮಸ್ತ ಜನತೆಗೆ ವಿಶೇಷವಾಗಿ ಮುಸ್ಲಿಂ ಬಾಂಧವರಿಗೆ ಶುಭ ಕೋರಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು, ಈ ಹಬ್ಬ ಆತ್ಮ ಸಂಯಮ, ದಾನ ಮತ್ತು ಮಾನವೀಯತೆ ಸಂದೇಶವನ್ನು ಸಾರುತ್ತದೆ ಎಂದು ತಿಳಿಸಿದ್ದಾರೆ. ಈದ್ ನಮ್ಮಲ್ಲಿ ಪ್ರೀತಿ, ಭ್ರಾತೃತ್ವ ಮತ್ತು ಸಾಮರಸ್ಯವನ್ನು ವೃದ್ಧಿಸಲಿ ಎಂದು ಆಶಿಸಿರುವ ಅವರು, ಸಮಾಜದ ಹಿಂದುಳಿದ ವರ್ಗಗಳ ನೆರವಿಗೆ ಧಾವಿಸುವ ಮೂಲಕ ರಾಷ್ಟ್ರದ ಪ್ರಗತಿಗೆ ಶ್ರಮಿಸಲು ಕರೆ ನೀಡಿದ್ದಾರೆ.

********

ಪ್ರಧಾನಿ ನರೇಂದ್ರ ಮೋದಿ, ಬಹ್ರೇನ್ ದೊರೆ ಹಮದ್ ಬಿನ್ ಇಸಾ ಅಲ್ ಖಲೀಫಾ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿ, ಈದ್ ಉಲ್-ಫಿತರ್ ಹಬ್ಬದ ಶುಭಾಶಯಗಳನ್ನು ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಇಬ್ಬರೂ ನಾಯಕರು ಪಶ್ಚಿಮ ಏಷ್ಯಾ ಪ್ರದೇಶದ ಪ್ರಸ್ತುತ ಪರಿಸ್ಥಿತಿಯ ಬಗ್ಗೆ ಚರ್ಚಿಸಿದ್ದಾರೆ ಮತ್ತು ಇಂಧನ ಹಾಗೂ ನಾಗರಿಕ ಮೂಲಸೌಕರ್ಯದ ಮೇಲಿನ ದಾಳಿಗಳನ್ನು ಖಂಡಿಸಿದ್ದಾರೆ. ಇದು ಜಾಗತಿಕ ಆಹಾರ, ಇಂಧನ ಮತ್ತು ರಸಗೊಬ್ಬರ ಭದ್ರತೆಯ ಮೇಲೆ ಪ್ರತಿಕೂಲ ಪರಿಣಾಮವನ್ನು ಬೀರಿದೆ. ನೌಕಾಯಾನ ಸ್ವಾತಂತ್ರ್ಯವನ್ನು ಖಚಿತಪಡಿಸಿಕೊಳ್ಳುವ ಮತ್ತು ಹಡಗು ಮಾರ್ಗಗಳನ್ನು ಮುಕ್ತ ಮತ್ತು ಸುರಕ್ಷಿತವಾಗಿರಿಸುವುದು ಅಗತ್ಯವಾಗಿದೆ ಎಂದು ಚರ್ಚೆಯ ವೇಳೆ ಪ್ರಧಾನಿ ನರೇಂದ್ರ ಮೋದಿ ಪುನರುಚ್ಚರಿಸಿದ್ದಾರೆ.

ಬಹ್ರೇನ್‌ನಲ್ಲಿರುವ ಭಾರತೀಯ ಸಮುದಾಯದ ಯೋಗಕ್ಷೇಮಕ್ಕಾಗಿ ಹಾಗೂ ನಿರಂತರ ಬೆಂಬಲಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಬಹ್ರೇನ್ ರಾಜರಿಗೆ ಧನ್ಯವಾದ ಸಲ್ಲಿಸಿದ್ದಾರೆ.

********

ಭಾರತ ಮತ್ತು ಭೂತಾನ್ ರಾಷ್ಟ್ರಗಳ ನಡುವೆ ಅಂಚೆ ಸೇವೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಮಹತ್ವದ ತಿಳುವಳಿಕಾ ಒಪ್ಪಂದಕ್ಕೆ ಸಹಿ ಹಾಕಲಾಗಿದೆ. ಭೂತಾನ್‌ಗೆ ಭೇಟಿ ನೀಡಿರುವ ಭಾರತದ ಅಂಚೆ ಇಲಾಖೆಯ ಕಾರ್ಯದರ್ಶಿಗಳು ಮತ್ತು ಭೂತಾನ್‌ನ ಮೂಲಸೌಕರ್ಯ ಮತ್ತು ಸಾರಿಗೆ ಸಚಿವಾಲಯದ ಅಧಿಕಾರಿಗಳ ನಡುವೆ ಈ ಒಪ್ಪಂದ ಏರ್ಪಟ್ಟಿದೆ. ಈ ಮೂಲಕ ಭಾರತೀಯ ಅಂಚೆ ಮತ್ತು ಭೂತಾನ್ ಅಂಚೆ ನಡುವಿನ ಸಹಕಾರಕ್ಕೆ ಹೊಸ ಚೌಕಟ್ಟು ಲಭ್ಯವಾದಂತಾಗಿದೆ. ಈ ಒಪ್ಪಂದದನ್ವಯ ಅಂಚೆ ಕಾರ್ಯಾಚರಣೆ, ತಂತ್ರಜ್ಞಾನ ಅಭಿವೃದ್ಧಿ, ಸಾಮರ್ಥ್ಯವರ್ಧನೆ ಮತ್ತು ಸರಕು ಸಂಪರ್ಕದಂತಹ ಕ್ಷೇತ್ರಗಳಲ್ಲಿ ಉಭಯ ರಾಷ್ಟ್ರಗಳು ಪರಸ್ಪರ ಸಹಕರಿಸಲಿವೆ.

********

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಇಂದಿನಿಂದ ಎರಡು ದಿನಗಳ ಕಾಲ ಮಹಾರಾಷ್ಟ್ರ ಪ್ರವಾಸ ಕೈಗೊಳ್ಳಲಿದ್ದಾರೆ. ತಮ್ಮ ಭೇಟಿಯ ಮೊದಲ ದಿನದಂದು ಅವರು, ನಾಗ್ಪುರದ ಮಹರ್ಷಿ ವ್ಯಾಸ್ ಸಭಾಂಗಣದಲ್ಲಿ ಭಾರತೀಯ ಯುವ ಸಂಸತ್ತಿನ ೨೯ನೇ ರಾಷ್ಟ್ರೀಯ ಅಧಿವೇಶನದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ನಂತರ ಅವರು, ರತನ್ ಟಾಟಾ ಮಹಾರಾಷ್ಟ್ರ ರಾಜ್ಯ ಕೌಶಲ್ಯ ವಿಶ್ವವಿದ್ಯಾಲಯದ ಮೊದಲ ಘಟಿಕೋತ್ಸವ ಸಮಾರಂಭ ಮತ್ತು ಮುಂಬೈನಲ್ಲಿ ೬೪ನೇ ಜೈನ ದೀಕ್ಷಾ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ಭೇಟಿಯ ಎರಡನೇ ದಿನದಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಮಹಾರಾಷ್ಟ್ರದ ಪುಣೆಯಲ್ಲಿರುವ ನಿಸರ್ಗೋಪಚಾರ್ ಆಶ್ರಮದ ಸಂಸ್ಥಾಪನಾ ದಿನಾಚರಣೆಯಲ್ಲಿ ಭಾಗವಹಿಸಲಿದ್ದಾರೆ.

********

ಅಸ್ಸಾಂ, ಕೇರಳ, ತಮಿಳುನಾಡು, ಪಶ್ಚಿಮಬಂಗಾಳ ಮತ್ತು ಪುದುಚೇರಿ ಸೇರಿದಂತೆ ಒಟ್ಟು ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಗಳು ಮತ್ತು ಆರು ರಾಜ್ಯಗಳ ಉಪಚುನಾವಣೆಗಳಿಗೆ ಮುಂಚಿತವಾಗಿ, ವಿದ್ಯುನ್ಮಾನ ಮತ್ತು ಡಿಜಿಟಲ್ ಮಾಧ್ಯಮಗಳಲ್ಲಿ ರಾಜಕೀಯ ಜಾಹೀರಾತುಗಳನ್ನು ನಿಯಂತ್ರಿಸಲು ಭಾರತೀಯ ಚುನಾವಣಾ ಆಯೋಗ ಆದೇಶ ಹೊರಡಿಸಿದೆ. ಈ ಆದೇಶದ ಪ್ರಕಾರ, ಎಲ್ಲಾ ರಾಜಕೀಯ ಪಕ್ಷಗಳು, ಅಭ್ಯರ್ಥಿಗಳು ಮತ್ತು ವ್ಯಕ್ತಿಗಳು ಅಥವಾ ಸಂಸ್ಥೆಗಳು ಸಹ ತಮ್ಮ ಜಾಹೀರಾತುಗಳನ್ನು ಪ್ರಕಟಿಸುವ ಮೊದಲು ಮಾಧ್ಯಮ ಪ್ರಮಾಣೀಕರಣ ಮತ್ತು ಮೇಲ್ವಿಚಾರಣಾ ಸಮಿತಿಯಿಂದ ಅನುಮೋದನೆ ಪಡೆಯಬೇಕು. ಈ ನಿಯಮವು ಟಿವಿ, ರೇಡಿಯೋ, ಸಾರ್ವಜನಿಕ ಪ್ರದರ್ಶನ ಪರದೆಗಳು, ಇ-ಪೇಪರ್‌ಗಳು, ಎಸ್‌ಎಮ್‌ಎಸ್, ಧ್ವನಿ ಸಂದೇಶಗಳು ಮತ್ತು ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿನ ಜಾಹೀರಾತುಗಳಿಗೆ ಅನ್ವಯಿಸುತ್ತದೆ.

********

ಫ್ರಾನ್ಸ್‌ನಲ್ಲಿ ನಡೆಯುತ್ತಿರುವ ಆರ್ಲಿಯನ್ಸ್ ಮಾಸ್ಟರ್ಸ್ ಬ್ಯಾಡ್ಮಿಂಟನ್ ಟೂರ್ನಿಯ ಮಹಿಳಾ ಸಿಂಗಲ್ಸ್‌ನ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ನಿನ್ನೆ ಭಾರತದ ತನ್ವಿ ಶರ್ಮಾ, ಜಪಾನ್‌ನ ೬ನೇ ಶ್ರೇಯಾಂಕಿತ ನಾತ್ಸುಕಿ ನಿದಾಯ್‌ರಾ ಅವರನ್ನು ೨೧-೧೪, ೨೧-೧೪ ನೇರ ಸೆಟ್‌ಗಳಿಂದ ಮಣಿಸಿ, ಸೆಮಿಫೈನಲ್ ಪ್ರವೇಶಿಸಿದರು.

ಇಂದು ನಡೆಯಲಿರುವ ಸೆಮಿಫೈನಲ್ಸ್ ಪಂದ್ಯದಲ್ಲಿ ತನ್ವಿ ಶರ್ಮಾ, ಮಾಜಿ ವಿಶ್ವ ಚಾಂಪಿಯನ್ ಜಪಾನ್‌ನ ನೊಜೊಮಿ ಒಕುಹರಾ ವಿರುದ್ಧ ಸೆಣಸಲಿದ್ದಾರೆ. ಮತ್ತೊಂದು ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ನಿನ್ನೆ ಭಾರತದ ಮಾಳವಿಕಾ ಬನ್ಸೋಡ್ ಪಂದ್ಯದ ಮಧ್ಯದಲ್ಲೇ ಪಂದ್ಯದಿಂದ ಹಿಂದೆಸರಿದ ಹಿನ್ನೆಲೆಯಲ್ಲಿ ಇಶಾರಾಣಿ ಬರುವಾ ಸೆಮಿಫೈನಲ್ ಪ್ರವೇಶಿಸಿದ್ದಾರೆ. ಇಂದಿನ ಸೆಮಿಫೈನಲ್‌ನಲ್ಲಿ ಅವರು, ಥೈಲ್ಯಾಂಡ್‌ನ ಪಿಚ್ಚಾಮಾನ್ ಒಪಾತ್‌ನಿಪುತ್ ವಿರುದ್ಧ ಸೆಣಸಲಿದ್ದಾರೆ.

****END****